ಇತ್ತೀಚಿನ ದಿನಗಳಲ್ಲಿ ನೆಗೆಟಿವ್ ಇನ್ ಫ್ಲೋ ಪ್ರಮಾಣವು ಗಣನೀಯವಾಗಿ ಏರುತ್ತಿರುವುದರಿಂದ ಈ ವಿಷಯವನ್ನು ತುಂಗಭದ್ರಾ ಮಂಡಳಿಯ ಸಭೆಯಲ್ಲಿ ಎತ್ತಲು ಯೋಜಿಸಲಾಗುತ್ತಿದೆ.

ಆ) ಒಳಬಳ್ಳಾರಿ ಏತ ನೀರಾವರಿ ಯೋಜನೆಯ ರೂ. 375.00 ಲಕ್ಷ ಮೊತ್ತದ ಅಂದಾಜಿಗೆ ಸರ್ಕಾರದ ಆದೇಶ ಸಂಖ್ಯೆ : ಜಸಂಇ 4 ಎಂಟಿಪಿ 2000 ದಿನಾಂಕ : 18-02-2002ರಲ್ಲಿ ತಾತ್ವಿಕ ಅನುಮೋದನೆ ನೀಡಲಾಗಿರುತ್ತದೆ. ನಂತರ ವಿವರವಾದ ಅಂದಾಜನ್ನು ತಯಾರಿಸಿ ತಾಂತ್ರಿಕ ಸಲಹಾ ಸಮಿತಿಯ ಅನುಮೋದನೆಗಾಗಿ ಸಲ್ಲಿಸಲಾಯಿತು. ತಾಂತ್ರಿಕ ಸಲಹಾ ಸಮಿತಿಯು ನೀಡಿದ ಸೂಚನೆಗಳ ಅನ್ವಯ ಅಂದಾಜನ್ನು ಮಾರ್ಪಡಿಸಿ ರೂ. 11.70 ಕೋಟಿಗಳಿಗೆ ಸಿದ್ಧಪಡಿಸಲಾಗಿದ್ದು, ಅಂದಾಜು ಪಟ್ಟಿಯು ಸರ್ಕಾರದ ಪರಿಶೀಲನೆಯಲ್ಲಿದೆ.

ಯೋಜನೆಗೆ 2005-06ನೇ ಸಾಲಿನಲ್ಲಿ ರೂ. 174.00 ಲಕ್ಷ ಹಾಗೂ 2007-08ನೇ ಸಾಲಿನಲ್ಲಿ ರೂ. 200.00 ಲಕ್ಷ ಅನುದಾನವನ್ನು ಒದಗಿಸಲಾಗಿರುತ್ತದೆ. ಯೋಜನೆಯ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ಇನ್ನೂ ನೀಡಬೇಕಾಗಿದ್ದು ಯಾವುದೇ ವೆಚ್ಚವಾಗಿರುವುದಿಲ್ಲ.

1033 (515) ಶ್ರೀ ಬಾದರ್ಲಿ ಹಂಪನಗೌಡ (ಸಿಂಧನೂರು) :- ಮಾನ್ಯ ವಸತಿ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:-

ಅ) ರಾಜ್ಯದಲ್ಲಿ 2007-08ನೇ ಸಾಲಿನ ನಿಗದಿಪಡಿಸಿದ ಆಶ್ರಯ ಮನೆಗಳು ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು) ;

ಆ) ತಾಲ್ಲೂಕು ಮಟ್ಟದ ಶಾಸಕರ ಅಧ್ಯಕ್ಷತೆಯ ಆಶ್ರಯ ಸಮಿತಿ ರಚನೆ ಮಾಡಲಾಗಿದೆಯೇ ; ಈ ಸಾಲಿನಲ್ಲಿ ಮಂಜೂರಾಗಿರುವ ಆಶ್ರಯ ಮತ್ತು ಅಂಬೇಡ್ಕರ್ ಮನೆಗಳನ್ನು ಆಶ್ರಯ ಸಮಿತಿ ಮೂಲಕವೇ ನಿರ್ಮಿಸಲಾಗುವುದೆ ?

ಶ್ರೀ ಡಿ.ಟಿ. ಜಯಕುಮಾರ್ (ವಸತಿ ಸಚಿವರು):-

ಅ) 2007-08ನೇ ಸಾಲಿನಲ್ಲಿ ಗ್ರಾಮೀಣ ಆಶ್ರಯ, ಗ್ರಾಮೀಣ ಅಂಬೇಡ್ಕರ್ ಮತ್ತು ನಗರ ಆಶ್ರಯ ಯೋಜನೆಯಡಿ ಗುರಿಯನ್ನು ನಿಗದಿಪಡಿಸಲಾಗಿರುವುದಿಲ್ಲ. ಆದರೆ 2007-08ನೇ ಆರ್ಥಿಕ ವರ್ಷದಲ್ಲಿ ಗ್ರಾಮೀಣ ಆಶ್ರಯ ಯೋಜನೆಯಡಿ ಹಿಂದಿನ

ಸಾಲಿನಲ್ಲಿ ಪ್ರಗತಿಯಲ್ಲಿರುವ 4,00,000 ಮನೆಗಳನ್ನು ಹಾಗೂ ನಗರ ಆಶ್ರಯ ಯೋಜನೆಯಡಿ 25,000 ಮನೆಗಳನ್ನು ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ.

ಆ) 2005-06 ಮತ್ತು 2006-07ನೇ ಸಾಲಿನ ಗ್ರಾಮೀಣ ಆಶ್ರಯ ಯೋಜನೆಯಡಿಯಲ್ಲಿ ಫಲಾನುಭವಿಗಳ ಆಯ್ಕೆಯನ್ನು ಗ್ರಾಮ ಸಭೆಯ ಮೂಲಕ ಆಯ್ಕೆ ಮಾಡಿ ಜಾಗೃತಿ ಸಮಿತಿಯು ಅನುಮೋದನೆ ಪಡೆದು ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

2007-08ನೇ ಸಾಲಿನಲ್ಲಿ ಫಲಾನುಭವಿಗಳ ಆಯ್ಕೆಗೆ ಸಂಬಂಧಿಸಿದಂತೆ ತಾಲ್ಲೂಕು ಮಟ್ಟದ ಶಾಸಕರ ಅಧ್ಯಕ್ಷತೆಯಲ್ಲಿ ಆಶ್ರಯ ಸಮಿತಿಗಳ ರಚನೆಯಾಗಿರುವುದಿಲ್ಲ.

1035 (1484) ಶ್ರೀ ಬಸವರಾಜ ರಾಯರೆಡ್ಡಿ (ಯಲಬುರ್ಗ) :- ಮಾನ್ಯ ಉನ್ನತ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:-

ಅ) 2007-08ನೇ ಸಾಲಿನಲ್ಲಿ ರಾಜ್ಯದ ಯಾವ ಯಾವ ಸ್ಥಳಗಳಿಗೆ ಹೊಸದಾಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ಮಂಜೂರು ಮಾಡಲಾಗಿದೆ.

ಆ) ಈ ಅವಧಿಯಲ್ಲಿ ಸರ್ಕಾರಕ್ಕೆ ಬಂದಿದ್ದ ಪ್ರಸ್ತಾವನೆಗಳು ಎಷ್ಟು ; ಪ್ರಸ್ತಾವನೆಗಳು ಹಾಗೂ ಮಂಜೂರಾಗಿರುವ ಪ್ರಥಮ ದರ್ಜೆ ಕಾಲೇಜುಗಳೆಷ್ಟು ; (ವಿಧಾನಸಭಾ, ಕ್ಷೇತ್ರವಾರು ವಿವರ ಒದಗಿಸುವುದು)

ಇ) ರಾಜ್ಯದಲ್ಲಿ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಇನ್ನೂ ಎಷ್ಟು ಸರ್ಕಾರಿ ಪ್ರಥಮ ದರ್ಜೆ ಪದವಿ ಕಾಲೇಜುಗಳ ಅವಶ್ಯಕತೆಯಿದೆ ;

ಈ) ಪ್ರಸಕ್ತ ಸಾಲಿನಲ್ಲಿ ಗುಲ್ಬರ್ಗಾ, ಬೀದರ್, ರಾಯಚೂರು, ಕೊಪ್ಪಳ ಜಿಲ್ಲೆಗಳಿಗೆ ಅತ್ಯಂತ ಕಡಿಮೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಮಂಜೂರು ಮಾಡಿ ತಾರತಮ್ಯ ಎಸಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಶ್ರೀ ಡಿ. ಹೆಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು):-

ಅ) 2007-08ನೇ ಸಾಲಿನಲ್ಲಿ ರಾಜ್ಯದ 167 ಸ್ಥಳಗಳಲ್ಲಿ ಹೊಸದಾಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ಮಂಜೂರು ಮಾಡಲಾಗಿದೆ. (ವಿವರವನ್ನು ಅನುಬಂಧದಲ್ಲಿ ಒದಗಿಸಿದೆ)